ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **575/2023**

ಪಿ.ಡಬ್ಲ್ಯೂ-**6**
ಸಿ.ಡಬ್ಲ್ಯೂ-**13**

ಸಾಕ್ಷಿಗೆ ದಿನಾಂಕ **28.08.2025** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ನಿಂಗರಾಜು . ಆರ್

ತಂದೆಯ ಹೆಸರು : ರಂಗಪ್ಪ

ವಯಸ್ಸು : 47 ವರ್ಷ

ಉದ್ಯೋಗ : ಪೋಲೀಸ್ ಮುಖ್ಯ ಪೇದೆ, ಅಬ್ಬಿನಹೊಳೆ ಪೋಲೀಸ್ ಠಾಣೆ

ವಾಸಸ್ಥಳ : ಅಬ್ಬಿನಹೊಳೆ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ನಾನು ಜುಲೈ 2016 ರಿಂದ ಜುಲೈ 2023 ರವರೆಗೆ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪೋಲೀಸ್ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ

ದಿನಾಂಕ 12.10.2022 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಬೆಳಗ್ಗೆ 10 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 415/2022 ರಂತೆ ಕಲಂ 279,304 ಎ ಐಪಿಸಿ ರಂತೆ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಪ್ರತಿಗಳನ್ನು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ದೂರನ್ನು ಮತ್ತು ಅದರಲ್ಲಿನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**1** ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-**1(**ಬಿ**)** ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**11** ಎಂದು ಗುರುತಿಸಲಾಯಿತು, ಸಾಕ್ಷಿಯ ಸಹಿಯನ್ನು ನಿಪಿ-**11(**ಎ**)** ಎಂದು ಗುರುತಿಸಲಾಯಿತು.

2. ಪ್ರಕರಣದ ಮುಂದಿನ ಕ್ರಮಕ್ಕಾಗಿ ಕಡತವನ್ನು ಚಾಸಾ-14 ರವರಿಗೆ ವಹಿಸಿಕೊಟ್ಟಿರುತ್ತೇನೆ.

<u>ಪಾಟೀ ಸವಾಲು ಆರೋಪಿ ಪರ ಶ್ರೀ ಡಿ ಜಿ ವಕೀಲರಿಂದ</u>

ನಾನು ಚಾಸಾ-1 ರವರು ನೀಡಿದ ಸುಳ್ಳು ದೂರಿನ ಆದಾರದ ಮೇರೆಗೆ ನಿಪಿ-1 ರಂತೆ ಸುಳ್ಳು ಪ್ರ ವ ವರದಿಯನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ . ಮೃತರ ಕುಟುಂಬಕ್ಕೆ ಪರಿಹಾರ ಸಿಗಲೀ ಎಂಬ ಉದ್ದೇಶದಿಂದ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ .

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ.ಹೇ.ಕೆ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.